ರಾಜ್ಯದಲ್ಲಿರುವ ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸುವುದು

2880 - ಶ್ರೀ ಬಚ್ಚೇಗೌಡ ಬಿ.ಎನ್. (ಹೊಸಕೋಟೆ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಎಷ್ಟು ಸರ್ಕಾರಿ ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಲು ವಿಶ್ವಬ್ಯಾಂಕಿನಿಂದ ಎಷ್ಟೆಷ್ಟು ಹಣ ಪಡೆಯಲಾಗಿದೆ?

ಆ) ವಿಶ್ವಬ್ಯಾಂಕಿನಿಂದ ಇದುವರೆವಿಗೆ ಬಿಡುಗಡೆ ಯಾಗಿರುವ ಹಣ ಎಷ್ಟು? ಈ ಆಸ್ಪತ್ರೆಗಳ ನಿರ್ಮಾಣ ಕಾರ್ಯ ಯಾವ ಹಂತದಲ್ಲಿವೆ?

ಇ) ಸರ್ಕಾರ ನಿರ್ಮಾಣ ಕಾರ್ಯ ಮುಗಿಸಲು ಏನಾದರೂ ಮಾರ್ಗಸೂಚಿ ಅನುಸರಿಸಿದೆಯೇ?

ಈ) ವಿಶ್ವಬ್ಯಾಂಕ್ ವಿಧಿಸಿರುವ ಷರತ್ತುಗಳಿಗೆ ಒಳಪಟ್ಟು ಯಾವುದೇ ಲೋಪವಿಲ್ಲದೆ ನಿರ್ಮಾಣ ಕಾರ್ಯ ನಡೆದಿದೆಯೇ?

ಡಾ॥ ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಕರ್ನಾಟಕ ಆರೋಗ್ಯ ಪದ್ಧತಿಗಳ ಅಭಿವೃದ್ಧಿ ಯೋಜನೆಯಡಿ ರೂ. 561.00 ಕೋಟಿ ವಿಶ್ವಬ್ಯಾಂಕ್ ನೆರವಿನಲ್ಲಿ ರಾಜ್ಯದ ಒಟ್ಟು 230 ಆಸ್ಪತ್ರೆಗಳನ್ನು ಮೇಲ್ದರ್ಜೆಗೆ ಏರಿಸಿ ಅಭಿವೃದ್ಧಿ ಪಡಿಸಲಾಗುತ್ತಿದೆ.

ಆ) ಇದುವರೆವಿಗೆ ವಿಶ್ವಬ್ಯಾಂಕ್ ಬಿಡುಗಡೆ ಮಾಡಿರುವ ಹಣ ರೂ. 254.82 ಕೋಟಿ. ಒಟ್ಟು 192 ಆಸ್ಪತ್ರೆಗಳ ಅಂದಾಜು ಮಂಜೂರಾಗಿದ್ದು 192 ಆಸ್ಪತ್ರೆಗಳ ಕಾಮಗಾರಿಗಳನ್ನು ಪ್ರಾರಂಭಿಸಲಾಗಿದೆ. ಇದುವರೆವಿಗೆ 60 ಆಸ್ಪತ್ರೆಗಳ ಕಾಮಗಾರಿ ಪೂರ್ಣಗೊಂಡಿದ್ದು ಉಳಿದ ಆಸ್ಪತ್ರೆಗಳ ಕಾಮಗಾರಿ ಪ್ರಗತಿಯಲ್ಲಿದೆ.

ಇ) ಗುತ್ತಿಗೆ ಮೊತ್ತವು ರೂ. 1.00 ಕೋಟಿಗಿಂತ ಕಡಿಮೆಯಿದಲ್ಲಿ ಕಾಮಗಾರಿ ಪ್ರಾರಂಭಿಸಿದ ದಿನಾಂಕದಿಂದ 12 ತಿಂಗಳ ಅವಧಿಯಲ್ಲಿ ಹಾಗೂ ರೂ. 1.00 ಕೋಟಿಗಿಂತ ಹೆಚ್ಚಾಗಿದ್ದಲ್ಲಿ 18 ತಿಂಗಳ ಅವಧಿಯಲ್ಲಿ ಪೂರ್ಣಗೊಳಿಸಲು ವಿಶ್ವಬ್ಯಾಂಕ್ ಮಾರ್ಗಸೂಚಿಯಿದ್ದು ಅದನ್ನು ಅನುಸರಿಸಲಾಗುತ್ತಿದೆ.

ಈ) ಹೌದು.

ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸೀಟುಗಳನ್ನು ಹೆಚ್ಚಿಸುವುದು

2881 - ಶ್ರೀ ಬಚ್ಚೇಗೌಡ ಬಿ.ಎನ್. (ಹೊಸಕೋಟೆ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸರ್ಕಾರಿ, ಅನುದಾನ ಮತ್ತು ಅನುದಾನ ರಹಿತ ಇಂಜಿನಿಯರಿಂಗ್ ಕಾಲೇಜುಗಳಿವೆ?